**All India Radio: Bangalore**
**National Bulletin In Kannada**
**15.01.2025  19.35 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಐಎನ್‌ಎಸ್ ಸೂರತ್, ಐಎನ್‌ಎಸ್ ನೀಲಗಿರಿ, ಐಎನ್‌ಎಸ್ ವಾಘ್‌ಶೀರ್ ಯುದ್ಧ ನೌಕೆಗಳನ್ನು ದೇಶಕ್ಕೆ ಸಮರ್ಪಿಸಿದ ಪ್ರಧಾನಿ ನರೇಂದ್ರ ಮೋದಿ
2. ಬೆಂಗಳೂರು ಸೇರಿದಂತೆ ದೇಶದ ೭ ಪ್ರಮುಖ ವಿಮಾನ ನಿಲ್ದಾಣಗಳಲ್ಲಿ ತ್ವರಿತ ಇಮಿಗ್ರೇಷನ್ ಪ್ರಕ್ರಿಯೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ನಾಳೆ ಚಾಲನೆ
3. ಮಹಾ ಕುಂಭವೇಳ-೨೦೨೫: ಅಂತಾರಾಷ್ಟ್ರೀಯ ನಿಯೋಗದಿಂದ ನಾಳೆ ತ್ರಿವೇಣಿ ಸಂಗಮದಲ್ಲಿ ಪುಣ್ಯ ಸ್ನಾನ
4. ಮಹಿಳಾ ಏಕದಿನ ಕ್ರಿಕೆಟ್; ಐರ್ಲೆಂಡ್ ವಿರುದ್ಧ ೩-೦ ಅಂತರದಿಂದ ಸರಣಿಯನ್ನು ಕ್ಲೀನ್‌ಸ್ವೀಪ್ ಮಾಡಿದ ಭಾರತ

<><><><>

ಪ್ರಧಾನಿ ನರೇಂದ್ರ ಮೋದಿ ಅವರಿಂದು ಮುಂಬೈನ ನೌಕಾ ನೆಲೆಯಲ್ಲಿ ಕಾರ್ಯಾರಂಭ ಮಾಡಲಿರುವ ಮುಂಚೂಣಿ ಯುದ್ಧ ನೌಕೆಗಳಾದ ಐಎನ್‌ಎಸ್ ಸೂರತ್, ಐಎನ್‌ಎಸ್ ನೀಲಗಿರಿ ಮತ್ತು ಜಲಾಂತರ್ಗಾಮಿ ಯುದ್ಧ ನೌಕೆ ಐಎನ್‌ಎಸ್ ವಾಘ್‌ಶೀರ್‌ಗಳನ್ನು ರಾಷ್ಟ್ರಕ್ಕೆ ಸಮರ್ಪಿಸಿದರು. ಐಎನ್‌ಎಸ್ ಸೂರತ್, ಐಎನ್‌ಎಸ್ ನೀಲಗಿರಿ ಮತ್ತು ಐಎನ್‌ಎಸ್ ವಾಘ್‌ಶೀರ್ ಯುದ್ಧ ನೌಕೆಗಳ ಕಾರ್ಯಾರಂಭ ರಕ್ಷಣಾ ಉತ್ಪಾದನೆ ಮತ್ತು ಕಡಲ ಭದ್ರತೆಯಲ್ಲಿ ಜಾಗತಿಕ ನಾಯಕನಾಗುವ ಭಾರತದ ದೃಷ್ಟಿಕೋನವನ್ನು ಸಾಕಾರಗೊಳಿಸುವಲ್ಲಿ ಮಹತ್ವದ ಹೆಜ್ಜೆಯಾಗಿದೆ. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಈ ದಿನ ಭಾರತದ ಕಡಲ ಪರಂಪರೆ, ನೌಕಾಪಡೆಯ ಇತಿಹಾಸದಲ್ಲಿ ಒಂದು ಮಹತ್ವದ ದಿನವಾಗಿದೆ. ಭಾರತದ ನೌಕಾಪಡೆಗೆ ಹೊಸ ರೂಪ ನೀಡಿದ್ದ ಛತ್ರಪತಿ ಶಿವಾಜಿ ಮಹಾರಾಜರ ಪುಣ್ಯಭೂಮಿಯಲ್ಲಿ ಇಂದು ೨೧ನೇ ಶತಮಾನದ ನೌಕಾಪಡೆಯನ್ನು ಸಶಕ್ತಗೊಳಿಸುವ ಪಥದಲ್ಲಿ ಪ್ರಮುಖ ಹೆಜ್ಜೆ ಇರಿಸಲಾಗಿದೆ ಎಂದರು. ಇಂದು ರಾಷ್ಟ್ರಕ್ಕೆ ಸಮರ್ಪಿಸಿದ ಯುದ್ಧ ನೌಕೆಗಳು, ದೇಶದ ಸುರಕ್ಷತೆ ಮತ್ತು ಪ್ರಗತಿಗೆ ಹೊಸ ಶಕ್ತಿ ನೀಡಲಿದೆ. ಭಾರತ ಇಂದು ಇಡೀ ವಿಶ್ವದಲ್ಲೇ ವಿಶೇಷವಾಗಿ ಜಾಗತಿಕ ದಕ್ಷಿಣ ರಾಷ್ಟ್ರಗಳಲ್ಲಿ ಒಂದು ವಿಶ್ವಾಸಾರ್ಹ ಹಾಗೂ ಜವಾಬ್ದಾರಿಯುತ ಪಾಲುದಾರ ರಾಷ್ಟ್ರವಾಗಿ ಹೊರಹೊಮ್ಮಿದೆ. ಭಾರತ, ವಿಸ್ತರಣಾವಾದವನ್ನು ಅನುಸರಿಸದೇ, ವಿಕಾಸವಾದದ ಭಾವನೆಯೊಂದಿಗೆ ಕೆಲಸ ಮಾಡುತ್ತದೆ ಎಂದು ಹೇಳಿದ್ದಾರೆ.

**ಧ್ವನಿ : ನರೇಂದ್ರ ಮೋದಿ**

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮಾತನಾಡಿ, ಇಂದಿನಿಂದ ಕಾರ್ಯಾರಂಭ ಮಾಡಲಿರುವ ಯುದ್ಧ ನೌಕೆಗಳಾದ ಐಎನ್‌ಎಸ್ ಸೂರತ್ ಮತ್ತು ಐಎನ್‌ಎಸ್ ನೀಲಗಿರಿಯ ಶೇಕಡ ೭೫ ರಷ್ಟು ಭಾಗಗಳು ಭಾರತದಲ್ಲೇ ವಿಕಸನಗೊಳಿಸಲಾಗಿದೆ. ಆತ್ಮನಿರ್ಭರ ಭಾರತ ಧ್ಯೇಯದೊಂದಿಗೆ ಇತರ ವಲಯಗಳಲ್ಲೂ ದೇಶೀಯ ನಿರ್ಮಿತ ಉತ್ಪನ್ನಗಳ ಬಳಕೆ ಹೆಚ್ಚುತ್ತಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಪ್ರಧಾನಿ ಅವರು, ನವಿ ಮುಂಬೈನ ಖಾರ್ಗಾರ್‌ನಲ್ಲಿಂದು ಇಸ್ಕಾನ್‌ನ ಶ್ರೀ ರಾಧಾ ಮದನ್ ಮೋಹನ್‌ಜೀ ದೇವಾಲಯವನ್ನು ಉದ್ಘಾಟಿಸಿದರು. ಒಂಬತ್ತು ಎಕರೆ ಪ್ರದೇಶದಲ್ಲಿ ಹರಡಿರುವ ಈ ದೇವಾಲಯ ಹಲವು ದೇವತೆಗಳ ಮಂದಿರ, ವೇದ ಶಿಕ್ಷಣ ಕೇಂದ್ರ, ಪ್ರಸ್ತಾವಿತ ವಸ್ತುಸಂಗ್ರಹಾಲಯಗಳು ಮತ್ತು ಸಭಾಂಗಣವನ್ನು ಒಳಗೊಂಡಿದೆ.

<><><><>

ದೇಶಕ್ಕಾಗಿ ಸಶಸ್ತ್ರ ಪಡೆಗಳು ಮಾಡಿದ ಅಪಾರ ತ್ಯಾಗಗಳನ್ನು ಗೌರವಿಸಲು ಇಂದು ದೇಶಾದ್ಯಂತ ಸೇನಾ ದಿನವನ್ನು ಆಚರಿಸಲಾಯಿತು. ಇದು ಭಾರತೀಯ ಸೈನಿಕರ ಧೈರ್ಯ, ಬದ್ಧತೆ ಮತ್ತು ಮಾತೃಭೂಮಿಗೆ ನೀಡಿದ ಸೇವೆಯನ್ನು ಆಚರಿಸುವ ದಿನವಾಗಿದೆ. ೧೯೪೯ರಲ್ಲಿ ಜನರಲ್ ಕೆ.ಎಂ.ಕಾರ್ಯಪ್ಪ, ಕೊನೆಯ ಬ್ರಿಟಿಷ್

ಕಮಾಂಡರ್-ಇನ್-ಚೀಫ್‌ನಿಂದ ಭಾರತೀಯ ಸೈನ್ಯದ ಕಮಾಂಡರ್ ಆಗಿ ಅಧಿಕಾರ ವಹಿಸಿಕೊಂಡು, ಸ್ವತಂತ್ರ ಭಾರತದ ಮೊದಲ ಭಾರತೀಯ ಕಮಾಂಡರ್-ಇನ್-ಚೀಫ್ ಆದ ಸ್ಮರಣಾರ್ಥ ಈ ದಿನವನ್ನು ಸೇನಾ ದಿನವನ್ನಾಗಿ ಆಚರಿಸಲಾಗುತ್ತದೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಸೇನಾ ಸಿಬ್ಬಂದಿ ಮತ್ತು ಮಾಜಿ ಸೈನಿಕರಿಗೆ ಸೇನಾ ದಿನದ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ರಾಷ್ಟ್ರದ ಸಾರ್ವಭೌಮತೆಯನ್ನು ಕಾಪಾಡುವಲ್ಲಿ ಮಹತರ ಪಾತ್ರ ವಹಿಸುವ ಸೇನಾ ಸಿಬ್ಬಂದಿಯ ಅಚಲ ಬದ್ಧತೆ ಎಲ್ಲರಿಗೂ ಸ್ಫೂರ್ತಿದಾಯಕ ಎಂದು ಹೇಳಿದ್ದಾರೆ. ಸೇನಾ ದಿನದ ಶುಭಾಶಯ ಕೋರಿದ ಪ್ರಧಾನಿ ನರೇಂದ್ರ ಮೋದಿ, ಪರಿವರ್ತನೆ ಮತ್ತು ಆಧುನೀಕರಣದ ಮೇಲೆ ಕೇಂದ್ರೀಕರಿಸಿ ಸೈನಿಕರು ಹಾಗೂ ಅವರ ಕುಟುಂಬದವರ ಕಲ್ಯಾಣಕ್ಕೆ ಸರ್ಕಾರ ಬದ್ಧವಾಗಿದೆ. ಭಾರತೀಯ ಸೇನೆ ದೃಢ ಸಂಕಲ್ಪ, ವೃತ್ತಿಪರತೆ, ಬದ್ಧತೆಯ ಸಾಕಾರ ರೂಪವಾಗಿದೆ ಎಂದರು.

<><><>

ಮುಂಬೈ, ಚೆನ್ನೈ, ಕೋಲ್ಕತ್ತಾ, ಬೆಂಗಳೂರು, ಹೈದರಾಬಾದ್, ಕೊಚ್ಚಿ ಮತ್ತು ಅಹಮದಾಬಾದ್ ವಿಮಾನ ನಿಲ್ದಾಣಗಳಲ್ಲಿ ತ್ವರಿತ ಇಮಿಗ್ರೇಷನ್ ಪ್ರಕ್ರಿಯೆ- ಎಫ್‌ಟಿಐ-ಟಿಟಿಪಿ ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ನಾಳೆ ಚಾಲನೆ ನೀಡಲಿದ್ದಾರೆ. ಇದು ಪ್ರಯಾಣಿಕರಿಗೆ ವಿಶ್ವದರ್ಜೆಯ ವಲಸೆ ಸೌಲಭ್ಯಗಳನ್ನು ಒದಗಿಸಲಿದೆ ಹಾಗೂ ಅಂತಾರಾಷ್ಟ್ರೀಯ ಪ್ರಯಾಣವನ್ನು ಸುಗಮ ಮತ್ತು ಸುರಕ್ಷಿತವಾಗಿಸುತ್ತದೆ. ಕೇಂದ್ರ ಗೃಹ ಸಚಿವಾಲಯದ ಪ್ರಕಾರ, ಈ ಕಾರ್ಯಕ್ರಮದಲ್ಲಿ ನೋಂದಾಯಿಸಿಕೊಳ್ಳಲು ಅರ್ಜಿದಾರರು ತಮ್ಮ ವಿವರಗಳನ್ನು ಭರ್ತಿ ಮಾಡುವ ಮೂಲಕ ಮತ್ತು ಅಗತ್ಯ ದಾಖಲೆಗಳನ್ನು ftittp.mha.gov.in ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವ ಮೂಲಕ ಆನ್‌ಲೈನ್ ನೋಂದಣಿಯನ್ನು ಪೂರ್ಣಗೊಳಿಸಬೇಕಾಗುತ್ತದೆ. ನೋಂದಾಯಿತ ಅರ್ಜಿದಾರರ ಬಯೋಮೆಟ್ರಿಕ್ ಮಾಹಿತಿಯನ್ನು ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿಯಲ್ಲಿ ಅಥವಾ ವಿಮಾನ ನಿಲ್ದಾಣದಲ್ಲಿ ಪಡೆಯಲಾಗುತ್ತದೆ. ನೋಂದಾಯಿತ ಪ್ರಯಾಣಿಕರು ಇ-ಗೇಟ್‌ನಲ್ಲಿ ತಮ್ಮ ವಿಮಾನಯಾನ ಬೋರ್ಡಿಂಗ್ ಪಾಸ್ ಅನ್ನು ಸ್ಕ್ಯಾನ್ ಮಾಡಬೇಕಾಗುತ್ತದೆ. ನಂತರ ತಮ್ಮ ಪಾಸ್‌ಪೋರ್ಟ್ ಅನ್ನು ಸ್ಕ್ಯಾನ್ ಮಾಡಬೇಕಾಗುತ್ತದೆ. ಆಗಮನ ಮತ್ತು ನಿರ್ಗಮನ ಎರಡು ಸ್ಥಳಗಳಲ್ಲಿ ಪ್ರಯಾಣಿಕರ ಬಯೋ ಮೆಟ್ರಿಕ್ ಅನ್ನು ಇ-ಗೇಟ್‌ಗಳಲ್ಲಿ ದೃಢೀಕರಿಸಲಾಗುತ್ತದೆ. ಈ ದೃಢೀಕರಣ ಯಶಸ್ವಿಯಾದ ನಂತರ ಇ-ಗೇಟ್ ಸ್ವಯಂ ಚಾಲಿತವಾಗಿ ತೆರೆಯುತ್ತದೆ. ಈ ಮೂಲಕ ವಲಸೆ ಅನುಮತಿ ನೀಡಲಾಗಿದೆ ಎಂದು ಪರಿಗಣಿಸಲಾಗುತ್ತದೆ.

<><><>

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳವು ಜಾಗತಿಕವಾಗಿ ಗಮನ ಸೆಳೆಯುತ್ತಿದೆ. ಇದರ ಭಾಗವಾಗಿ ಹತ್ತು ದೇಶಗಳ ೨೧ ಸದಸ್ಯರ ನಿಯೋಗವು ನಾಳೆ ತ್ರಿವೇಣಿ ಸಂಗಮದಲ್ಲಿ ಪುಣ್ಯ ಸ್ನಾನ ಮಾಡಲಿದೆ. ವಿದೇಶಾಂಗ ಸಚಿವಾಲಯದ ಆಹ್ವಾನದ ಮೇರೆಗೆ ನಿಯೋಗವು ಇಂದು ಪ್ರಯಾಗ್‌ರಾಜ್‌ಗೆ ಆಗಮಿಸಿದೆ. ವಾಸ್ತವ್ಯಕ್ಕಾಗಿ ಅರೆಲ್‌ನಲ್ಲಿರುವ ಟೆಂಟ್ ಸಿಟಿಯಲ್ಲಿ ವ್ಯವಸ್ಥೆ ಮಾಡಲಾಗಿದೆ. ಭೇಟಿ ಸಮಯದಲ್ಲಿ ನಿಯೋಗದ ಸದಸ್ಯರು ಮಹಾ ಕುಂಭಮೇಳ ಪ್ರದೇಶದಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ. ಪಾರಂಪರಿಕ ನಡಿಗೆಯಲ್ಲಿ ಸದಸ್ಯರು ಪ್ರಯಾಗ್‌ರಾಜ್‌ನ ಸಾಂಸ್ಕೃತಿಕ ಮತ್ತು ಐತಿಹಾಸಿಕ ಪರಂಪರೆಯನ್ನು ಕಣ್ತುಂಬಿಕೊಳ್ಳಲಿದ್ದಾರೆ. ನಾಳೆ ಹೆಲಿಕಾಪ್ಟರ್ ಮೂಲಕ ಮಹಾಕುಂಭ ಪ್ರದೇಶದ ವೈಮಾನಿಕ ನೋಟವನ್ನು ನಿಯೋಗದ ಸದಸ್ಯರು ಆನಂದಿಸಲಿದ್ದಾರೆ. ಅಂತಾರಾಷ್ಟ್ರೀಯ ನಿಯೋಗದಲ್ಲಿ ಫಿಜಿ, ಫಿನ್‌ಲ್ಯಾಂಡ್, ಗಯಾನ, ಮಲೇಷಿಯಾ, ಮಾರಿಷಸ್, ಸಿಂಗಾಪುರ, ದಕ್ಷಿಣ ಆಫ್ರಿಕಾ, ಶ್ರೀಲಂಕಾ, ಟ್ರಿನಿಡಾಡ್ ಮತ್ತು ಟೊಬಾಗೊ ಹಾಗೂ ಯೂನೈಟೆಡ್ ಅರಬ್ ಎಮಿರೇಟ್ಸ್ -ಯುಎಇ ಪ್ರತಿನಿಧಿಗಳು ಸೇರಿದ್ದಾರೆ.

<><><>

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳವು ಜಾಗತಿಕವಾಗಿ ಗಮನ ಸೆಳೆಯುತ್ತಿದೆ. ಇದರ ಭಾಗವಾಗಿ ಹತ್ತು ದೇಶಗಳ ೨೧ ಸದಸ್ಯರ ನಿಯೋಗವು ನಾಳೆ ತ್ರಿವೇಣಿ ಸಂಗಮದಲ್ಲಿ ಪುಣ್ಯ ಸ್ನಾನ ಮಾಡಲಿದೆ. ವಿದೇಶಾಂಗ ಸಚಿವಾಲಯದ ಆಹ್ವಾನದ ಮೇರೆಗೆ ನಿಯೋಗವು ಇಂದು

ಪ್ರಯಾಗ್‌ರಾಜ್‌ಗೆ ಆಗಮಿಸಿದೆ. ವಾಸ್ತವ್ಯಕ್ಕಾಗಿ ಅರೆಲ್‌ನಲ್ಲಿರುವ ಟೆಂಟ್ ಸಿಟಿಯಲ್ಲಿ ವ್ಯವಸ್ಥೆ ಮಾಡಲಾಗಿದೆ. ಭೇಟಿ ಸಮಯದಲ್ಲಿ ನಿಯೋಗದ ಸದಸ್ಯರು ಮಹಾ ಕುಂಭಮೇಳ ಪ್ರದೇಶದಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ. ಪಾರಂಪರಿಕ ನಡಿಗೆಯಲ್ಲಿ ಸದಸ್ಯರು ಪ್ರಯಾಗ್‌ರಾಜ್‌ನ ಸಾಂಸ್ಕೃತಿಕ ಮತ್ತು ಐತಿಹಾಸಿಕ ಪರಂಪರೆಯನ್ನು ಕಣ್ತುಂಬಿಕೊಳ್ಳಲಿದ್ದಾರೆ. ನಾಳೆ ಹೆಲಿಕಾಪ್ಟರ್ ಮೂಲಕ ಮಹಾಕುಂಭ ಪ್ರದೇಶದ ವೈಮಾನಿಕ ನೋಟವನ್ನು ನಿಯೋಗದ ಸದಸ್ಯರು ಆನಂದಿಸಲಿದ್ದಾರೆ. ಅಂತಾರಾಷ್ಟ್ರೀಯ ನಿಯೋಗದಲ್ಲಿ ಫಿಜಿ, ಫಿನ್‌ಲ್ಯಾಂಡ್, ಗಯಾನ, ಮಲೇಷಿಯಾ, ಮಾರಿಷಸ್, ಸಿಂಗಾಪುರ, ದಕ್ಷಿಣ ಆಫ್ರಿಕಾ, ಶ್ರೀಲಂಕಾ, ಟ್ರಿನಿಡಾಡ್ ಮತ್ತು ಟೊಬಾಗೊ ಹಾಗೂ ಯೂನೈಟೆಡ್ ಅರಬ್ ಎಮಿರೇಟ್ಸ್ -ಯುಎಇ ಪ್ರತಿನಿಧಿಗಳು ಸೇರಿದ್ದಾರೆ. ಮತ್ತೊಂದೆಡೆ ಮಹಾಕುಂಭಮೇಳದಲ್ಲಿ ಸ್ವಚ್ಛತೆ, ನೈರ್ಮಲ್ಯ ಹಾಗೂ ಸ್ವಚ್ಛ ಮತ್ತು ಗುಣಮಟ್ಟದ ಆಹಾರಕ್ಕೆ ಸರ್ಕಾರವು ವಿಶೇಷ ಒತ್ತು ನೀಡಿದೆ. ಲಕ್ಷಾಂತರ ಭಕ್ತರಿಗೆ ಸ್ವಚ್ಛ ಮತ್ತು ಗುಣಮಟ್ಟದ ಆಹಾರವನ್ನು ಆಹಾರ ಸುರಕ್ಷತಾ ಅಧಿಕಾರಿಗಳು ಖಚಿತ ಪಡಿಸುತ್ತಿದ್ದಾರೆ. ಮಹಾ ಕುಂಭಮೇಳವನ್ನು ೫ ವಲಯಗಳು ಮತ್ತು ೨೫ ಸೆಕ್ಟರ್‌ಗಳಾಗಿ ವಿಂಗಡಿಸಲಾಗಿದೆ. ಪ್ರತಿವಲಯದಲ್ಲಿ ಆಹಾರ ಸುರಕ್ಷತಾ ಅಧಿಕಾರಿಗಳು ನಿಯಮಿತವಾಗಿ ನೈರ್ಮಲ್ಯ ಮತ್ತು ಸುರಕ್ಷಿತಾ ಮಾನದಂಡಗಳನ್ನು ಮೇಲ್ವಿಚಾರಣೆ ನಡೆಸುತ್ತಿದ್ದಾರೆ. ಮಹಾ ಕುಂಭಮೇಳ ಕುರಿತಂತೆ ಆಕಾಶವಾಣಿ ಬಾತ್ಮೀದಾರರಿಂದ ಒಂದು ವರದಿ

<><><><>

ಭಾರತವು ಜಾಗತಿಕವಾಗಿ ಸ್ಪರ್ಧಾತ್ಮಕ ಉತ್ಪಾದನಾ ಕೇಂದ್ರವಾಗಿ ಹೊರಹೊಮ್ಮಲು ’ಮೇಕ್ ಇನ್ ಇಂಡಿಯಾ’ ಉಪಕ್ರಮವು ಒಂದು ಸಾಬೀತಾದ ತಂತ್ರವಾಗಿದೆ ಎಂದು ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ಅಭಿಪ್ರಾಯಪಟ್ಟರು. ಜರ್ಮನಿಯ ಫ್ರಾಂಕ್‌ಪರ್ಟ್‌ನಲ್ಲಿ ನಡೆಯುತ್ತಿರುವ ಹೈಮ್‌ಟೆಕ್ಸ್‌ಟಿಲ್-೨೦೨೫ ರಲ್ಲಿ ಭಾರತದ ಮಳಿಗೆಯನ್ನು ಉದ್ಘಾಟಿಸಿದ ಅವರು, ಕಳೆದ ೧೦ ವರ್ಷಗಳಲ್ಲಿ ಭಾರತ ಗಮನಾರ್ಹವಾಗಿ ಬೆಳವಣಿಗೆ ಕಂಡಿದೆ ಹಾಗೂ ವಿದೇಶಿ ನೇರ ಹೂಡಿಕೆ ಪ್ರಮಾಣ ಕೂಡ ಹೆಚ್ಚಳವಾಗಿದೆ ಎಂದು ಹೇಳಿದರು.

<><><><>

ಗುಜರಾತ್‌ನ ರಾಜ್‌ಕೋಟ್‌ನ ನಿರಂಜನ್ ಶಾ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ ಮತ್ತು ಐರ್ಲೆಂಡ್ ಮಹಿಳಾ ತಂಡಗಳ ನಡುವಿನ ೩ನೇ ಅಂತಾರಾಷ್ಟ್ರೀಯ ಏಕದಿನ ಪಂದ್ಯದಲ್ಲಿ ಐರ್ಲೆಂಡ್ ವಿರುದ್ಧ ಭಾರತ ೩೦೪ ರನ್‌ಗಳಿಂದ ಬೃಹತ್ ಜಯ ದಾಖಲಿಸಿದೆ. ಈ ಮೂಲಕ ಮಹಿಳಾ ಕ್ರಿಕೆಟ್ ಇತಿಹಾಸದಲ್ಲಿ ಒಂದು ತಂಡದ ವಿರುದ್ಧ ಭಾರತ ದಾಖಲಿಸಿದ ಅತಿಹೆಚ್ಚು ಅಂತರದ ಗೆಲುವಾಗಿದೆ. ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಭಾರತ, ನಿಗದಿತ ೫೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೪೩೫ ರನ್ ಗಳಿಸಿತು. ಭಾರತದ ಪರ ಪ್ರತಿಕಾ ರಾವಲ್ ೧೫೪ ರನ್ ಗಳಿಸಿದರೆ, ನಾಯಕಿ ಸ್ಮೃತಿ ಮಂದಾನಾ ೧೩೫ ರನ್ ಗಳಿಸಿದರು. ಈ ಬೃಹತ್ ಗುರಿಯನ್ನು ಬೆನ್ನತ್ತಿದ ಐರ್ಲೆಂಡ್ ವನಿತಾ ತಂಡ, ೩೧.೪ ಓವರ್‌ಗಳಲ್ಲಿ ೧೩೧ ರನ್‌ಗಳಿಗೆ ತನ್ನೆಲ್ಲ ವಿಕೆಟ್ ಕಳೆದುಕೊಂಡಿತು. ಈ ಪಂದ್ಯದ ಗೆಲುವಿನ ಮೂಲಕ ಭಾರತ ಮಹಿಳಾ ತಂಡ ೩-೦ ಅಂತರದಿಂದ ಸರಣಿಯನ್ನು ಕ್ಲೀನ್‌ಸ್ವೀಪ್ ಮಾಡಿದೆ.

<><><><>

ನವದೆಹಲಿಯ ಇಂದಿರಾ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಖೋ ಖೋ ವಿಶ್ವಕಪ್ ೨೦೨೫ರ ಪಂದ್ಯದಲ್ಲಿ ಭಾರತೀಯ ಮತ್ತು ಇರಾನ್ ಮಹಿಳಾ ಖೋ ಖೋ ತಂಡಗಳು ಮುಖಾಮುಖಿಯಾಗಿವೆ. ಇಂದು ರಾತ್ರಿ ನಡೆಯಲಿರುವ ಪಂದ್ಯದಲ್ಲಿ ಭಾರತೀಯ ಪುರುಷರ ತಂಡ, ಪೆರು ತಂಡದೊಂದಿಗೆ ಸೆಣಸಾಟ ನಡೆಸಲಿದೆ. ಪಂದ್ಯ ರಾತ್ರಿ ೮:೧೫ಕ್ಕೆ ಪ್ರಾರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>